**1 ನೇ ಹೆಚ್ಚುವರಿ ಸಿವಿಲ್ ನ್ಯಾಯಾಧೀಶರವರ ನ್ಯಾಯಾಲಯ ಮತ್ತು ಜೆ ಎಂ ಎಫ್ ಸಿ, ಹರಿಹರ**

**ಸಿ.ಸಿ. 313/2015**

**ಸಾಕ್ಷಿಯನ್ನು ಕರೆಯಿಸಿ ಪ್ರಮಾಣ ವಚನ ಭೋಧಿಸಲಾಯಿತು.** **ಪಿಡಬ್ಲ್ಯೂ 17**

**ದಿನಾಂಕಃ 29.04.2024** **ಸಿಡಬ್ಲ್ಯೂ 18**

| | |
|---|---|
| ಹೆಸರು | ಮನ್ಸೂರ್ ಅಹಮದ್ |
| ತಂದೆ ಹೆಸರು | ಮಹಮ್ಮದ್ ಶರೀಫ್ ಸಾಬ್ |
| ವಯಸ್ಸು | 50 ವರ್ಷ |
| ಉದ್ಯೋಗ | ಎ ಎಸ್ ಐ |
| ವಾಸ ಸ್ಥಳ | ಹರಿಹರ |

**ಮುಖ್ಯ ವಿಚಾರಣೆಃ** ಸಹಾಯಕ ಸರ್ಕಾರಿ ಅಭಿಯೋಜಕರಿಂದಃ

ನಾನು ಸನ್ 2012 ರಿಂದ 2015 ವರೆಗೆ ಹರಿಹರ ನಗರ ಠಾಣೆಯಲ್ಲಿ ಹೆಚ್ ಸಿ ಆಗಿ ಕರ್ತವ್ಯ ನಿರ್ವಹಿಸಿದ್ದೇನೆ.

ದಿಃ 25.10.2013 ರಂದು ನಾನು ಠಾಣಾ ಪ್ರಭಾರದಲ್ಲಿದ್ದಾಗ ರಾತ್ರಿ 8.00 ಗಂಟೆ ಸಮಯದಲ್ಲಿ ಚಾಸಾ.1 ರವರು ಠಾಣೆಗೆ ಹಾಜರಾಗಿ ನೀಡಿದ ಗಣಕೀಕೃತ ದೂರನ್ನು ಸ್ವೀಕರಿಸಿಕೊಂಡು ಠಾಣಾ ಗುನ್ನೆ ನಂ. 309/2013 ರ ಕಲಂ 406,409 ಮತ್ತು 420 ರ ಐಪಿಸಿ ರಡಿಯಲ್ಲಿ ಪ್ರಕರಣ ದಾಖಲಿಸಿಕೊಂಡು ಮಾನ್ಯ ನ್ಯಾಯಾಲಯಕ್ಕೆ ಪ್ರ. ವ ವರದಿಯನ್ನು ಪಿಸಿ -329 ರವರ ಮೂಲಕ ನಿವೇಸಿಕೊಂಡಿರುತ್ತೇನೆ. ನಂತರ ಪ್ರಕರಣದ ಮುಂದಿನ ತನಿಖೆಗಾಗಿ ಕಡತವನ್ನು ಚಾಸಾ.19 ರವರಿಗೆ ನಿವೇಸಿಕೊಂಡಿರುತ್ತೇನೆ. ಸದರಿ ದೂರನ್ನು ಈಗ ನೋಡುತ್ತಿದ್ದು ಅದರಲ್ಲಿ ನನ್ನ ಸಹಿ ಇದೆ. ಸದರಿ ದೂರನ್ನು ಈಗಾಗಲೇ ನಿಪಿ.1 ಎಂದು ಗುರುತಿಸಲಾಗಿದ್ದು, ಸಾಕ್ಷಿಯು ಗುರುತಿಸಿದ ಸಹಿಯನ್ನು ನಿಪಿ.1 (ಬಿ) ಎಂದು ಗುರುತಿಸಲಾಯಿತು. ಸದರಿ ಪ್ರ. ವ ವರದಿಯನ್ನು ಈಗ ನೋಡುತ್ತಿದ್ದು ಅದರಲ್ಲಿ ನನ್ನ ಸಹಿ ಇದೆ. ಸದರಿ ಪ್ರ. ವ ವರದಿಯನ್ನು ನಿಪಿ.32 ಎಂದು ಸಾಕ್ಷಿಯ ಸಹಿಯನ್ನು ನಿಪಿ.32 (ಎ) ಎಂದು ಗುರುತಿಸಲಾಯಿತು.

**ಪಾಟೀ ಸವಾಲುಃ ಆರೋಪಿ ಪರ ವಕೀಲರಿಂದಃ**

ಆರೋಪಿ ಪರ ವಕೀಲರು ಪಾಟೀ ಸವಾಲಿಗಾಗಿ ಕಾಲಾವಕಾಶ ಕೋರಿದ್ದು ಸಕಾರಣಗಳು ಇಲ್ಲದ ಕಾರಣ ಪಾಟೀ ಸವಾಲು ಇಲ್ಲ ಎಂದು ತೆಗೆದುಕೊಳ್ಳಲಾಯಿತು.

**ಮರುವಿಚಾರಣೆ ಇಲ್ಲ.**

(ಮುಕ್ತ ನ್ಯಾಯಾಲಯದಲ್ಲಿ ಸಾಕ್ಷಿಯ ಹೇಳಿಕೆಯನ್ನು ನನ್ನ ಉಕ್ತಲೇಖನದಂತೆ ಬೆರಳಚ್ಚುಪಡಿಸಲಾಯಿತು.)

ಓದಿ ಹೇಳಿ ಕೇಳಿ ಸರಿ ಇದೆ.

Sd/-

1 ನೇ ಹೆಚ್ಚುವರಿ ಸಿವಿಲ್ ನ್ಯಾಯಾದೀಶರು
ಮತ್ತು ಜೆಎಂಎಫ್‌ಸಿ, ಹರಿಹರ.